ಜೈವಿಕ ತಂತ್ರಜ್ಞಾನ ಪಾರ್ಕ್ ಸ್ಥಾಪನೆ

745 (1047) ಶ್ರೀ ಈಶ್ವರ್ ಭಿಮಣ್ಣ ಖಂಡ್ರೆ (ಭಾಲ್ಕಿ) : ಮಾನ್ಯ ವಸತಿ, ವಾರ್ತಾ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ಬೆಂಗಳೂರು ಜಲಮಂಡಳಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದ ಯಾವ ಯಾವ ಸ್ಥಳಗಳಲ್ಲಿ ಜೈವಿಕ ತಂತ್ರಜ್ಞಾನ ಪಾರ್ಕ್‌ಗಳನ್ನು ಸ್ಥಾಪಿಸಲು ಸರ್ಕಾರ ನಿರ್ಧರಿಸಿದೆ;

ಆ) ಈ ಪಾರ್ಕ್‌ಗಳಿಂದ ಯಾರು ಯಾರಿಗೆ ಯಾವ ರೀತಿಯ ಅನುಕೂಲಗಳು ದೊರೆಯಲಿವೆ;

ಇ) ಬೀದರ್‌ನಲ್ಲಿಯೂ ಸಹ ಜೈವಿಕ ತಂತ್ರಜ್ಞಾನ ಪಾರ್ಕ್‌ನ್ನು ಸ್ಥಾಪಿಸಲು ನಿರ್ಧರಿಸಿರುವುದು ನಿಜವಲ್ಲವೇ;

ಈ) ಹಾಗಿದ್ದಲ್ಲಿ, ಬೀದರ್‌ನಲ್ಲಿ ಇದಕ್ಕಾಗಿ ಎಲ್ಲಿ ಸ್ಥಳಗಳನ್ನು ಗುರುತಿಸಲಾಗಿದೆ;

ಉ) ಈ ಪಾರ್ಕ್‌ಗಳನ್ನು ಸ್ಥಾಪಿಸಲು ಅಗತ್ಯವಿರುವ ಅಂದಾಜು ಮೊತ್ತವೆಷ್ಟು, ಇಲ್ಲಿಯವರೆವಿಗೆ ಸರ್ಕಾರ ಇದಕ್ಕಾಗಿ ಎಷ್ಟು ಹಣವನ್ನು ವೆಚ್ಚ ಮಾಡಿದೆ;

ಊ) ಇಂತಹ ಪಾರ್ಕ್‌ಗಳ ಸ್ಥಾಪನೆಗೆ ಕೇಂದ್ರ ಸರ್ಕಾರದಿಂದ ಹಣಕಾಸಿನ ನೆರವನ್ನು ಕೋರಿ ಪ್ರಸ್ತಾವನೆಯನ್ನು ಸಲ್ಲಿಸಿದೆಯೇ; ಹಾಗಿದ್ದಲ್ಲಿ, ಇದರ ವಿವರಗಳೇನು?

ಶ್ರೀ ಕಟ್ಟಾ ಸುಬ್ರಹ್ಮಣ್ಯ ನಾಯ್ಡು (ವಸತಿ, ವಾರ್ತಾ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ಬೆಂಗಳೂರು ಜಲಮಂಡಳಿ ಸಚಿವರು) :

ಅ) ಬೆಂಗಳೂರು, ಬೀದರ್, ಮಂಗಳೂರು, ಧಾರವಾಡ ಹಾಗೂ ಮೈಸೂರು ನಗರಗಳಲ್ಲಿ ಜೈವಿಕ ತಂತ್ರಜ್ಞಾನ ಪಾರ್ಕ್‌ಗಳನ್ನು ಸ್ಥಾಪಿಸಲು ನಿರ್ಧರಿಸಲಾಗಿದೆ.

ಆ) ಈ ಪಾರ್ಕ್‌ಗಳಲ್ಲಿ ಜೈವಿಕ ತಂತ್ರಜ್ಞಾನಕ್ಕೆ ಸಂಬಂಧಿಸಿದ ವಿವಿಧ ಕ್ಷೇತ್ರಗಳಲ್ಲಿ (ಜೈವಿಕ ತಂತ್ರಜ್ಞಾನ, ಪ್ರಾಣಿ ತಳಿ ಶಾಸ್ತ್ರ, ಮೀನುಗಾರಿಕೆ, ಕೃಷಿ

ಹಾಗೂ ಪೌಷ್ಟಿಕ / ಔಷಧ ಮೂಲಿಕೆಗಳು) ಸಂಶೋಧನೆ ಮತ್ತು ಅಭಿವೃದ್ಧಿ ಕಾರ್ಯಗಳು ನಡೆಯಲಿವೆ.

ಇದರಿಂದ, ಈ ಭಾಗದಲ್ಲಿರುವ ಜೈವಿಕ ತಂತ್ರಜ್ಞಾನ ಉದ್ದಿಮೆಗಳಿಗೆ ಪ್ರೋತ್ಸಾಹ / ಉತ್ತೇಜನ ದೊರೆಯಲಿದ್ದು, ಸ್ಥಳೀಯ ಯುವಕ ಯುವತಿಯರಿಗೆ ಉದ್ಯೋಗಾವಕಾಶಗಳು ಲಭ್ಯವಾಗಲಿವೆ.

ಇ) ಬೀದರ್‌ನಲ್ಲಿ ವೈವೇರಿಯಂ – Animal House (ಪ್ರಾಣಿ ಗೃಹ) ಸ್ಥಾಪಿಸಲು ನಿರ್ಧರಿಸಲಾಗಿದೆ.

ಈ) ವೈವೇರಿಯಂ – Animal House (ಪ್ರಾಣಿ ಗೃಹ) ವನ್ನು ಬೀದರ್‌ನಲ್ಲಿರುವ ಕರ್ನಾಟಕ ಪಶು ಸಂಗೋಪನೆ ಹಾಗೂ ಮೀನುಗಾರಿಕೆ ವಿಶ್ವವಿದ್ಯಲಯದ ಆವರಣದಲ್ಲಿ ಸ್ಥಾಪಿಸಲು ಉದ್ದೇಶಿಸಲಾಗಿದೆ.

ಉ) ಈ ಪಾರ್ಕ್‌ಗಳನ್ನು ಸ್ಥಾಪಿಸಲು ಒಟ್ಟು ವೆಚ್ಚ ಸುಮಾರು ರೂ. 150 ಕೋಟಿಗಳೆಂದು ಅಂದಾಜಿಸಲಾಗಿದ್ದು, ಇದನ್ನು ಸಾರ್ವಜನಿಕ/ ಖಾಸಗಿ ಸಹಭಾಗಿತ್ವದಲ್ಲಿ ಸ್ಥಾಪಿಸಲು ಉದ್ದೇಶಿಸಲಾಗಿದ್ದು, ಸರ್ಕಾರವು ಶೇಕಡ 20 ರಷ್ಟು ಮೊತ್ತವನ್ನು ಭರಿಸಲು ಯೋಜಿಸಲಾಗಿದೆ. ಇಲ್ಲಿಯವರೆಗೆ ಇದಕ್ಕಾಗಿ ಯಾವುದೇ ಹಣ ವೆಚ್ಚ ಮಾಡಿರುವುದಿಲ್ಲ.

ಈ ಪಾರ್ಕುಗಳ ಸ್ಥಾಪನೆಗಾಗಿ 2010–11ನೇ ಸಾಲಿನಲ್ಲಿ ಸುಮಾರು 15 ಕೋಟಿ ರೂಪಾಯಿಗಳನ್ನು ಸರ್ಕಾರದಿಂದ ನೀಡಲು ಯೋಜಿಸಲಾಗಿದೆ.

ಊ) ಯಾವುದೇ ಪ್ರಸ್ತಾವನೆಯನ್ನು ಇದುವರೆವಿಗೆ ಕೇಂದ್ರ ಸರ್ಕಾರಕ್ಕೆ ಸಲ್ಲಿಸಿರುವುದಿಲ್ಲ.

ಶಿಕ್ಷಣ ಸಂಸ್ಥೆಗಳ ವಿವರ

747 (1087) ಶ್ರೀ ಕೆ.ಜೆ.ಜಾರ್ಜ್ (ಸರ್ವಜ್ಞನಗರ) : ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಸರ್ವಜ್ಞನಗರ ಮತಕ್ಷೇತ್ರದ ವ್ಯಾಪ್ತಿಯಲ್ಲಿ ಸರ್ಕಾರಿ/ಅನುದಾನಿತ/ ಅನುದಾನ ರಹಿತವಾದ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆ/ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ/ ಸರ್ಕಾರಿ ಪ್ರೌಢಶಾಲೆಗಳಲ್ಲಿ ಎಷ್ಟು ಜನ ಶಿಕ್ಷಕರು ಕಾರ್ಯನಿರ್ವಹಿಸುತ್ತಿದ್ದಾರೆ (ಖಾಲಿಯಿರುವ ಹುದ್ದೆಗಳ ವಿವರ ನೀಡುವುದು);